ಮಂಗಳೂರು ವಿಶ್ವವಿದ್ಯಾನಿಲಯ
MANGALORE UNIVERSITY

ಕುಲಸಚಿವರ ಕಛೇರಿ
ಮಂಗಳಗಂಗೋತ್ರಿ – 574 199
Office of the Registrar
Mangalagangothri – 574 199

ಕ್ರಮಾಂಕ/ No. : ಎಂಯು/ಎಸಿಸಿ/ಮೀ/ಸಿಆರ್.14/2022-23/ಎ6

ದಿನಾಂಕ/Date: 26/07/2022

## ಸುತ್ತೋಲೆ

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಸಂಯೋಜಿತ/ ಸ್ವಾಯತ್ತ ಹಾಗೂ ಘಟಕ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಪ್ರವೇಶಾತಿಯಲ್ಲಿ ಕಡ್ಡಾಯವಾಗಿ ಮೀಸಲಾತಿ ಅನುಷ್ಠಾನಗೊಳಿಸುವ ಕುರಿತು.

ಉಲ್ಲೇಖ: ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ: 19-07-2022.

~~~~~~

ಮಂಗಳೂರು ವಿಶ್ವವಿದ್ಯಾನಿಲಯದ ಸಂಯೋಜನೆಗೊಳಪಟ್ಟ ಎಲ್ಲಾ ಸಂಯೋಜಿತ/ ಸ್ವಾಯತ್ತ ಹಾಗೂ ಘಟಕ ಕಾಲೇಜುಗಳಲ್ಲಿ ಶೈಕ್ಷಣಿಕ ವರ್ಷ 2022-23ನೇ ಸಾಲಿನಲ್ಲಿ ಪದವಿ ಕಾರ್ಯಕ್ರಮಗಳಿಗೆ ಪ್ರವೇಶಾತಿ ನೀಡುವಾಗ ವಿಶ್ವವಿದ್ಯಾನಿಲಯ ಮಂಜೂರಾತಿ ನೀಡಿದ ವಿದ್ಯಾರ್ಥಿ ಪರಿಮಿತಿಗೆ ಅನುಗುಣವಾಗಿ ಹಾಗೂ ಸರಕಾರದ ಮೀಸಲಾತಿ (ಎಲ್ಲಾ ವರ್ಗಗಳಿಗೆ ಸಂಬಂಧಿಸಿದ) ಆದೇಶದಂತೆ ಕ್ರಮ ಕೈಗೊಂಡು ವಿದ್ಯಾರ್ಥಿಗಳ ಆಯ್ಕೆ ಪಟ್ಟಿಯನ್ನು ಪ್ರಕಟಿಸಬೇಕೆಂದು ತಿಳಿಸಲಾಗಿದೆ.

ಕಾಲೇಜುಗಳ ಪ್ರಾಂಶುಪಾಲರು ವಿದ್ಯಾರ್ಥಿಗಳ ಪ್ರವೇಶಾತಿಯ ನಂತರ ವಿಶ್ವವಿದ್ಯಾನಿಲಯಕ್ಕೆ ಪ್ರವೇಶಾತಿ ಅನುಮೋದನೆಯ ತಃಖ್ತೆಯನ್ನು ಕಳುಹಿಸುವಾಗ ಕಾರ್ಯಕ್ರಮವಾರು / ವರ್ಗವಾರು ಮೀಸಲಾತಿ ನಿಯಮದಂತೆ ಪ್ರವೇಶಾತಿ ಮಾಡಿರುವುದನ್ನು ಸ್ಪಷ್ಟವಾಗಿ ನಮೂದಿಸಬೇಕು.

ಅರ್ಹ ವಿದ್ಯಾರ್ಥಿಗಳಿಗೆ ಮೀಸಲಾತಿಯಡಿಯಲ್ಲಿ ಪ್ರವೇಶಾತಿ ನಿರಾಕರಿಸಿರುವುದು ದೃಢಪಟ್ಟಲ್ಲಿ ಅಂತಹ ಕಾಲೇಜುಗಳ ವಿರುದ್ಧ ಸೂಕ್ತ ಕ್ರಮ ಜರಗಿಸಲಾಗುವುದು ಎಂದು ಈ ಮೂಲಕ ತಿಳಿಸಲಾಗಿದೆ.

ಕುಲಸಚಿವರು.

ರಿಗೆ:

ಮಂಗಳೂರು ವಿಶ್ವವಿದ್ಯಾನಿಲಯದ ಎಲ್ಲಾ ಸಂಯೋಜಿತ/
ಸ್ವಾಯತ್ತ ಹಾಗೂ ಘಟಕ ಕಾಲೇಜುಗಳ ಪ್ರಾಂಶುಪಾಲರುಗಳಿಗೆ

ಪ್ರತಿ:

1. ವಿಶೇಷಾಧಿಕಾರಿ, ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ ಘಟಕ, ಮಂಗಳೂರು ವಿಶ್ವವಿದ್ಯಾನಿಲಯ.
2. ಕುಲಪತಿಯವರ ಆಪ್ತ ಕಾರ್ಯದರ್ಶಿ/ ಕುಲಸಚಿವರ ಆಪ್ತ ಸಹಾಯಕರು, ಮಂಗಳೂರು ವಿಶ್ವವಿದ್ಯಾನಿಲಯ.
3. ಎ3, ಎ4, ಎ5, ಎ7, ಎ8, ಎ9, ಎ10 ವಿಷಯ ನಿರ್ವಾಹಕರು, ಶೈಕ್ಷಣಿಕ ವಿಭಾಗ, ಕುಲಸಚಿವರ ಕಛೇರಿ, ಮಂಗಳೂರು ವಿಶ್ವವಿದ್ಯಾನಿಲಯ.
~~~~~~

# MANGALORE UNIVERSITY

## ADMISSION TO DEGREE COURSES
Pattern of Seats Allotment

| Status of Institution | Under Management Quota | | For Remaining Seats | |
|---|---|---|---|---|
| | % of seats allotted in each combination | To whom it is reserved (Category) | General Merit (based on merit) | For Students belongs to Reserve categories |
| Private (Aided) | 20% | To any student | 50% | 50% |
| Minority Institutions (Should have attained Minority status by the Government) | 50% | To Students belonging to the minority community to which the institution belongs | 50% | 50% |
| SC/ST Institutions (Should have attained SC/ST status by the Government) | 50% | -do- | 50% | 50% |
| Private (Unaided) | 50% | To any student | 50% | 50% |
| Unaided combinations in Private (aided) institutions | 50% | To any student | 50% | 50% |

REGISTRAR.

# MANGALORE UNIVERSITY

## SEATS RESERVED FOR VARIOUS CATEGORIES

| | |
|---|---|
| • General Merit | 50% |
| • Scheduled Castes | 15% |
| • Scheduled Tribes | 03% |
| • Category 1 | 04% |
| • Category 2A | 15% |
| • Category 2B | 04% |
| • Category 3A | 04% |
| • Category 3B | 05% |
| • Differently abled | 05% (Outside the Intake) |
| • Hyderabad Karnataka | 08% of Total Intake |

REGISTRAR.

ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ/ಶೈವಿ/51/SC ST ಅನುಪಾಲನಾ ವರದಿ/2023-24

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಶೇಷಾದ್ರಿ ರಸ್ತೆ, ಬೆಂಗಳೂರು-560001,
ದಿನಾಂಕ: 18.07.2023

ಇವರಿಗೆ,

ಜಂಟಿ ನಿರ್ದೇಶಕರು,
ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ,
ಬೆಂಗಳೂರು, ಮೈಸೂರು, ಮಂಗಳೂರು,
ಶಿವಮೊಗ್ಗ, ಧಾರವಾಡ ಮತ್ತು ಕಲಬುರಗಿ.

ಮಾನ್ಯರೇ,

**ವಿಷಯ:** ರಾಜ್ಯಾಧೀನ ಸೇವೆಗಳ ನೇಮಕಾತಿ ಹಾಗೂ ವಿದ್ಯಾರ್ಥಿಗಳ ದಾಖಲಾತಿ ಪ್ರಕ್ರಿಯೆಗಳಲ್ಲಿ **"ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಪಂಗಡಗಳು ಅಧ್ಯಾದೇಶ, 2022, ದಿನಾಂಕ : 23.10.2022"** ಅನ್ನು ಅಳವಡಿಸಿಕೊಂಡು ಕ್ರಮವಹಿಸಿರುವ ಬಗ್ಗೆ **ಅನುಪಾಲನಾ ವರದಿಯನ್ನು** ಸಲ್ಲಿಸುವ ಕುರಿತು.

**ಉಲ್ಲೇಖ:** 1. ಸರ್ಕಾರದ ಪತ್ರಸಂಖ್ಯೆ : ಇಡಿ 46 ವಿವಿಧ 2023, ದಿನಾಂಕ : 10.07.2023.
2. ಸರ್ಕಾರದ ಸುತ್ತೋಲೆ ಸಂಖ್ಯೆ : ಸಕಇ 84 ಎಸ್‌ಟಿಪಿ 2021, ದಿನಾಂಕ : 15.11.2022.

******

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ದಿನಾಂಕ : 23.10.2022 ರ ಅಧಿನಿಯಮದಲ್ಲಿ, ಕರ್ನಾಟಕ ರಾಜ್ಯದ ಅನುಸೂಚಿತ ಜಾತಿಗಳ ಮೀಸಲಾತಿ ಪ್ರಮಾಣವನ್ನು ಶೇ. 15 ರಿಂದ ಶೇ. 17 ಕ್ಕೆ ಮತ್ತು ಅನುಸೂಚಿತ ಪಂಗಡಗಳ ಮೀಸಲಾತಿ ಪ್ರಮಾಣವನ್ನು ಶೇ.3 ರಿಂದ ಶೇ. 7 ಕ್ಕೆ ಹೆಚ್ಚಿಸುವ ಉದ್ದೇಶದಿಂದ **ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಪಂಗಡಗಳು (ಶೈಕ್ಷಣಿಕ ಸಂಸ್ಥೆಗಳಲ್ಲಿನ ಸ್ಥಾನಗಳಲ್ಲಿ ಮತ್ತು ರಾಜ್ಯಾಧೀನ ಸೇವೆಗಳಲ್ಲಿನ ನೇಮಕಾತಿ ಅಥವಾ ಹುದ್ದೆಗಳಲ್ಲಿ ಮೀಸಲಾತಿ) ಅಧ್ಯಾದೇಶ, 2022 ನ್ನು ಜಾರಿಗೆ ತರಲಾಗಿರುತ್ತದೆ.**

ಈ ಹಿನ್ನೆಲೆಯಲ್ಲಿ, ಉಲ್ಲೇಖ (2) ರ ಸರ್ಕಾರದ ಸುತ್ತೋಲೆಯಲ್ಲಿ ತಿಳಿಸಿರುವಂತೆ ಮೀಸಲಾತಿ ಪ್ರಮಾಣವನ್ನು ಅನುಷ್ಠಾನಗೊಳಿಸುವಂತೆ ಸೂಚಿಸಿ ಸುತ್ತೋಲೆಯನ್ನು ಪರಿಚಲಿಸಲಾಗಿರುತ್ತದೆ (ಪ್ರತಿ ಲಗತ್ತಿಸಿದೆ). ಪ್ರಸ್ತುತ ವಿದ್ಯಾರ್ಥಿಗಳ ದಾಖಲಾತಿ ಪ್ರಕ್ರಿಯೆಗಳಲ್ಲಿ ಮೇಲ್ಕಂಡ ಅಧ್ಯಾದೇಶವನ್ನು ಕಡ್ಡಾಯವಾಗಿ ಅಳವಡಿಸಿಕೊಂಡು ಕ್ರಮವಹಿಸಿರುವ ಬಗ್ಗೆ ಅನುಪಾಲನಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಬೇಕಾಗಿರುವುದರಿಂದ ಈ ಬಗ್ಗೆ ಈ ಪತ್ರ ತಲುಪಿದ ಕೂಡಲೇ ಅನುಪಾಲನಾ ವರದಿಯನ್ನು ಈ ಕಛೇರಿಗೆ ಸಲ್ಲಿಸುವಂತೆ ಸೂಚಿಸಲಾಗಿದೆ.

ತಮ್ಮ ವಿಶ್ವಾಸಿ

ಕಾಲೇಜು ಶಿಕ್ಷಣ ನಿರ್ದೇಶಕರು

SC — 17%
ST — 7%

ಅಧ್ಯಾದೇಶದ ಕಲಂ 4ರಂತೆ ರಾಜ್ಯಾಧೀನ ಸೇವೆಗಳಲ್ಲಿನ ನೇಮಕಾತಿಗಳು ಅಥವಾ ಹುದ್ದೆಗಳಲ್ಲಿನ ಮೀಸಲಾತಿ ಬಗ್ಗೆ ಪ್ರತ್ಯೇಕವಾಗಿ ತಿಳಿಸಲಾಗುವುದು. ..... ......

(ಶಿವಲಿಂಗಪ್ರಭು ವಾಲಿ)
ಸರ್ಕಾರದ ಅಧೀನ ಕಾರ್ಯದರ್ಶಿ-2
ಸಮಾಜ ಕಲ್ಯಾಣ ಇಲಾಖೆ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ/ಶೈವಿ/36/ಪದವಿ ಶುಲ್ಕ/2022-23

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:30.01.2023

**ಪರಿಚಲನಾ ಆದೇಶ**

The Karnataka Schedulded Castes and Scheduled Tribes (Reservation of seats in Education Institutions and of appointments or posts in the services under the state) ordinance, 2022 ರನ್ನು ಶೈಕ್ಷಣಿಕ ಸಂಸ್ಥೆಗಳಲ್ಲಿ ಅನುಷ್ಠಾನಗೊಳಿಸುವ ಬಗ್ಗೆ ಸರ್ಕಾರದಿಂದ ಹೊರಡಿಸಿರುವ ಸುತ್ತೋಲೆ ಸಂಖ್ಯೆ: ಸಕಇ 84 ಎಸ್‌ಟಿಪಿ 2021 ದಿನಾಂಕ:15.11.2022 ನ್ನು ಈ ಕೆಳಕಂಡವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ರವಾನಿಸಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ:

1. ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಅಗತ್ಯ ಕ್ರಮಕ್ಕಾಗಿ.
2. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಮಾಹಿತಿ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ತಿಳಿಸಲಾಗಿದೆ.

ಪ್ರತಿಯನ್ನು:

1) ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಕಲಬುರಗಿ.
2) ಆಯುಕ್ತರ, ನಿರ್ದೇಶಕರ, ಹೆಚ್ಚುವರಿ ನಿರ್ದೇಶಕರ, ಜಂಟಿ ನಿರ್ದೇಶಕರ, ಮುಖ್ಯ ಆಡಳಿತಾಧಿಕಾರಿಗಳ ಆಪ್ತ ಶಾಖೆ, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು.
3) ಕಛೇರಿ ಪ್ರತಿ

ಕರ್ನಾಟಕ ಸರ್ಕಾರ

ಸಕಇ 84 ಎಸ್‌ಟಿಪಿ 2021

ಕರ್ನಾಟಕ ಸರ್ಕಾರ ಸಚಿವಾಲಯ
ವಿಕಾಸಸೌಧ
ಬೆಂಗಳೂರು ದಿನಾಂಕ:15-11-2022

(ಪ್ರಕಾಶ್ ಕೆ.ಎಂ. ಹಿರೇಮಠ)
ಸರ್ಕಾರದ ಪ್ರಧಾನ ಕಾರ್ಯದರ್ಶಿ

## ಸುತ್ತೋಲೆ

**ವಿಷಯ:** The Karnatka Schedulded Castes and Scheduled Tribes (Reservation of seats in Education Institutions and of appointments or posts in the services under the state) ordinance, 2022 ರನ್ನು ಶೈಕ್ಷಣಿಕ ಸಂಸ್ಥೆಗಳಲ್ಲಿ ಅನುಷ್ಠಾನಗೊಳಿಸುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಅಧಿಸೂಚನೆ ಸಂಖ್ಯೆ:ಸಕಇ 84 ಎಸ್‌ಟಿಪಿ 2021 ದಿನಾಂಕ:31-10-2022.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖದ ಸರ್ಕಾರದ ಅಧಿಸೂಚನೆಯಂತೆ, The Karnatka Schedulded Castes and Scheduled Tribes (Reservation of seats in Education Institutions and of appointments or posts in the services under the state) ordinance, 2022 ದಿನಾಂಕ:01-11-2022 ರಿಂದ ಜಾರಿಗೆ ತರಲಾಗಿದೆ.

ಸದರಿ ಅಧ್ಯಾದೇಶದಂತೆ, ಮೀಸಲಾತಿ ಪ್ರಮಾಣವನ್ನು ಪರಿಶಿಷ್ಟ ಜಾತಿಗೆ ಶೇ.15% ರಿಂದ ಶೇ.17% ಕ್ಕೆ ಮತ್ತು ಪರಿಶಿಷ್ಟ ಪಂಗಡಕ್ಕೆ ಶೇ.3% ರಿಂದ ಶೇ.7%ಕ್ಕೆ ಹೆಚ್ಚಿಸಲಾಗಿದೆ.

ಸದರಿ ಅಧ್ಯಾದೇಶದ ಕಲಂ 2 (1)(ಡಿ) ರಂತೆ ಶೈಕ್ಷಣಿಕ ಸಂಸ್ಥೆಗಳು ಎಂದರೆ ರಾಜ್ಯಸರ್ಕಾರದಿಂದ ನಿರ್ವಹಿಸಲಾಗುತ್ತಿರುವ ಅಥವಾ ರಾಜ್ಯನಿಧಿಗಳಿಂದ ಅನುದಾನ ಪಡೆಯುತ್ತಿರುವ ಯಾವುದೇ ಶಾಲೆ, ಕಾಲೇಜು ಅಥವಾ ಇತರ ಶೈಕ್ಷಣಿಕ ಸಂಸ್ಥೆ ಎಂದು ಪರಿಭಾಷಿಸಲಾಗಿದೆ.

ಸದರಿ ಅಧ್ಯಾದೇಶದ ಕಲಂ 3ರಂತೆ, ದಿನಾಂಕ:01-11-2022 ರಿಂದ ಅನ್ವಯವಾಗುವಂತೆ ಶೈಕ್ಷಣಿಕ ಸಂಸ್ಥೆಗಳಲ್ಲಿ ವಿದ್ಯಾರ್ಥಿಗಳ ಪ್ರವೇಶ ಪ್ರಕ್ರಿಯೆಯಲ್ಲಿ ಪರಿಶಿಷ್ಟ ಜಾತಿಗೆ ಶೇ.17% ಮತ್ತು ಪರಿಶಿಷ್ಟ ಪಂಗಡಕ್ಕೆ ಶೇ.7%ರಂತೆ ಮೀಸಲಾತಿ ಪ್ರಮಾಣವನ್ನು ಅನುಷ್ಠಾನಗೊಳಿಸತಕ್ಕದ್ದು.

ಆದರೆ ದಿನಾಂಕ:01-11-2022ಕ್ಕೆ ಮುಂಚೆ ಈಗಾಗಲೇ ಪ್ರವೇಶ ಪ್ರಕ್ರಿಯೆ ಪೂರ್ಣಗೊಂಡಿದ್ದಲ್ಲಿ, ಅಂತಹ ಪ್ರಕರಣಗಳಿಗೆ ಸದರಿ ಅಧ್ಯಾದೇಶ ಅನ್ವಯಿಸುವುದಿಲ್ಲ.

24/07/23